10-12-2020

ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 501ಕ್ಕೆ ಉತ್ತರಗಳು: 10-12-2020

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಕೋವಿಡ್-19 ಪ್ರಯುಕ್ತ ಎಲ್ಲಾ ನೇಮಕಾತಿಗಳಿಗೂ ಆರ್ಥಿಕ ಮಿತಿವ್ಯಯ ಹೇರಿರುವುದು ನಿಜವೇ; ಹಾಗಾದರೆ, ಈ ಆದೇಶವನ್ನು ಯಾವಾಗ ಹಿಂಪಡೆಯಲಾಗುವುದು; | ಕೋವಿಡ್-19 ಸಂಕ್ರಾಮಿಕ ರೋಗದಿಂದಾಗಿ ರಾಜ್ಯದಲ್ಲಿ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವ ಹಿನ್ನೆಲೆಯಲ್ಲಿ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8 2020, ದಿನಾಂಕ:10.06.2020 ಹಾಗೂ **ಸುತ್ತೋಲೆ ಸಂಖ್ಯೆ:ಆಇ 03 ಬಿಇಎಂ 2020, ದಿನಾಂಕ:06.07.2020ರನ್ವಯ ರಾಜ್ಯದ ಎಲ್ಲಾ ಸಿವಿಲ್ ಸೇವಾ ನೇರ ನೇಮಕಾತಿಗಳಿಗೆ** ಆರ್ಥಿಕ ಮಿತವ್ಯಯ ಹೇರಲಾಗಿದೆ.<br>**ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಆರ್ಥಿಕ ಮಿತವ್ಯಯದ ಆದೇಶವನ್ನು ತಕ್ಷಣ ಹಿಂಪಡೆಯುವುದು** ಕಷ್ಟಸಾಧ್ಯವಾಗಿರುತ್ತದೆ. |
| (ಆ) | ಹಣಕಾಸು ಇಲಾಖೆಯು ರಾಜ್ಯದಲ್ಲಿ 1995ರ ನಂತರ ಪ್ರಾರಂಭವಾದ ಎಲ್ಲಾ ವರ್ಗದ ಅರ್ಹವಾದ ಶಾಶ್ವತ ಅನುದಾನ ರಹಿತ ಶಾಲಾ ಕಾಲೇಜುಗಳಿಗೆ ಅನುದಾನ ನೀಡಲು ಇರುವ ತೊಂದರೆಗಳೇನು; (ವಿವರವಾದ ಮಾಹಿತಿ ನೀಡುವುದು) | 1995ರ ನಂತರ ಪ್ರಾರಂಭವಾದ ಶಾಲಾ ಕಾಲೇಜುಗಳು ಅನುದಾನಕ್ಕೆ ಒಳಪಡಿಸುವ ಬಗ್ಗೆ ಸರ್ಕಾರ ಯಾವುದೇ ರೀತಿಯ ನಿರ್ಧಾರ ತೆಗೆದುಕೊಂಡಿರುವುದಿಲ್ಲ.<br><br>ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಮಾನ್ಯ ಉಪ ಸಭಾಪತಿಗಳು, ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳು ಹಾಗೂ ಅಧಿಕಾರಿಗಳೊಂದಿಗೆ ದಿನಾಂಕ:15.09.2017 ಮತ್ತು ದಿನಾಂಕ:27.09.2017 ರಂದು ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಆಡಳಿತ ಮಂಡಳಿಗಳ ಸಮಸ್ಯೆಗಳ ಕುರಿತು ನಡೆದ ಸಭೆಯ ನಡವಳಿಯ ಕ್ರಮ ಸಂಖ್ಯೆ: 11(ಎ) ರಲ್ಲಿ ತೆಗೆದುಕೊಂಡ ನಿರ್ಧಾರವು ಈ ಕೆಳಕಂಡಂತಿರುತ್ತದೆ.<br><br>**"1994-95ರ ನಂತರ ಪ್ರಾರಂಭವಾದ ಶಾಲಾ ಕಾಲೇಜುಗಳಿಗೆ ವೇತನಾನುದಾನ ವಿಸ್ತರಿಸುವ ಕುರಿತು ಪರಿಗಣನೆಗೆ ಇರುವುದಿಲ್ಲ."** |

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| | | ಪ್ರಸ್ತುತ, ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ, ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಸರ್ಕಾರದ ವೆಚ್ಚದಲ್ಲಿ ಮಿತವ್ಯಯದ ನೀತಿ ಅನುಸರಿಸಬೇಕಾಗಿದೆ. ಆದ್ದರಿಂದ, ಯಾವುದೇ ಹೊಸ ಶಾಲಾ ಕಾಲೇಜುಗಳು ಅನುದಾನಕ್ಕೆ ಒಳಪಡಿಸುವುದು ಸೂಕ್ತವಾಗಿರುವುದಿಲ್ಲ. |
| (ಇ) | ಯಾವ ಕಾಲಮಿತಿಯೊಳಗೆ ಸರ್ಕಾರ ಈ ಶಾಲಾ ಕಾಲೇಜುಗಳಿಗೆ ಅನುದಾನ ನೀಡುವುದು; | ಮೇಲಿನ ಉತ್ತರದಿಂದಾಗಿ ಉದ್ಭವಿಸುವುದಿಲ್ಲ. |

ಸಂಖ್ಯೆ:ಆಇ 245 ವೆಚ್ಚ-8/2020

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:501ಗೆ ಪೂರಕ ಟಿಪ್ಪಣಿ**

ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವ ಹಿನ್ನೆಲೆಯಲ್ಲಿ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8 2020, ದಿನಾಂಕ:10.06.2020 ರನ್ವಯ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ ರಾಜೀನಾಮೆ ಇತರೆ ಯಾವುದೇ ಕಾರಣಗಳಿಂದ ಖಾಲಿಯಾಗುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆ. ಹಾಗೂ ಸುತ್ತೋಲೆ ಸಂಖ್ಯೆ:ಆಇ 03 ಬಿಇಎಂ 2020, ದಿನಾಂಕ:06.07.2020 ರನ್ವಯ 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್ ಲಾಗ್ ಹುದ್ದೆಗಳೂ ಸೇರಿದಂತೆ ರಾಜ್ಯ ಸಿವಿಲ್ ಸೇವೆಯಲ್ಲಿನ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಸಹ ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ.

2. ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಇದಕ್ಕಾಗಿ ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವ ಉದ್ದೇಶಕ್ಕೆ ಕೈಗೊಂಡಿರುವ ಕ್ರಮಗಳಲ್ಲಿ ನೇಮಕಾತಿಗಳನ್ನು ತಡೆಹಿಡಿದಿರುವುದು ಸೇರಿದೆ. ಈ ಹಿನ್ನೆಲೆಯಲ್ಲಿ ಆರ್ಥಿಕ ಮಿತವ್ಯಯದ ಆದೇಶವನ್ನು ತಕ್ಷಣ ಹಿಂಪಡೆಯುವುದು ಕಷ್ಟಸಾಧ್ಯವಾಗಿರುತ್ತದೆ.

3. ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಮಾನ್ಯ ಉಪ ಸಭಾಪತಿಗಳು, ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳು ಹಾಗೂ ಅಧಿಕಾರಿಗಳೊಂದಿಗೆ ದಿನಾಂಕ:15.09.2017 ಮತ್ತು ದಿನಾಂಕ:27.09.2017 ರಂದು ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಆಡಳಿತ ಮಂಡಳಿಗಳ ಸಮಸ್ಯೆಗಳ ಕುರಿತು ನಡೆದ ಸಭೆಯ ನಡವಳಿಯ ಕ್ರಮ ಸಂಖ್ಯೆ: 11(ಎ) ರಲ್ಲಿ ತೆಗೆದುಕೊಂಡ ನಿರ್ಧಾರವು ಈ ಕೆಳಕಂಡಂತಿರುತ್ತದೆ.

**"1994-95ರ ನಂತರ ಪ್ರಾರಂಭವಾದ ಶಾಲಾ ಕಾಲೇಜುಗಳಿಗೆ ವೇತನಾನುದಾನ ವಿಸ್ತರಿಸುವ ಕುರಿತು ಪರಿಗಣನೆಗೆ ಇರುವುದಿಲ್ಲ."**

4. ಪ್ರಸ್ತುತ, ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ, ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಸರ್ಕಾರದ ವೆಚ್ಚದಲ್ಲಿ ಮಿತವ್ಯಯದ ನೀತಿ ಅನುಸರಿಸಬೇಕಾಗಿದೆ. ಆದ್ದರಿಂದ, ಯಾವುದೇ ಹೊಸ ಶಾಲಾ ಕಾಲೇಜುಗಳು ಅನುದಾನಕ್ಕೆ ಒಳಪಡಿಸುವುದು ಸೂಕ್ತವಾಗಿರುವುದಿಲ್ಲ.

****